# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಲೋಕೇಶ್ ಪಲ್ಲವಿ ಹಿಂದಿನ ಅಧ್ಯಕ್ಷರು, ಹಿರೇಕೆರೆಹಳ್ಳಿ ಗ್ರಾಮ ಪಂಚಾಯತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ಜಿಲ್ಲೆ ಇವರ ಪತ್ರ ಸಂಖ್ಯೆ:ಜಿಪಂ:ಆ(3):ಸಿಸಿಎ/ಸಿಆರ್/24/2017-18 ದಿನಾಂಕ:20.08.2019.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಕ/ಅಭಿವೃದ್ಧಿ/ಸಿಆರ್/50/2019-20, ದಿನಾಂಕ:21.01.2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಚಿತ್ರದುರ್ಗ ಜಿಲ್ಲಾ ಪಂಚಾಯತ್‌ರವರು ಶ್ರೀ ಲೋಕೇಶ್ ಪಲ್ಲವಿ ಹಿಂದಿನ ಅಧ್ಯಕ್ಷರು, ಹಿರೇಕೆರೆಹಳ್ಳಿ ಗ್ರಾಮ ಪಂಚಾಯತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಶ್ರೀ ಲೋಕೇಶ್ ಪಲ್ಲವಿ ಹಿಂದಿನ ಅಧ್ಯಕ್ಷರು, ಹಿರೇಕೆರೆಹಳ್ಳಿ ಗ್ರಾಮ ಪಂಚಾಯತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ಪ್ರಕರಣಕ್ಕೆ ಸಂಬಧಿಸಿದಂತೆ, ವಿಶೇಷ ಲೆಕ್ಕ ತಪಾಸಣಾ ವರದಿಯ ಪ್ರತಿಯಲ್ಲಿ 14ನೇ ಹಣಕಾಸು ಯೋಜನೆಯಡಿ ರೂ.54,515/-ಗಳು ಹಾಗೂ ಸ್ವಚ್ಛ ಗ್ರಾಮ ಯೋಜನೆಯಡಿ ರೂ.74,063/-ಗಳನ್ನು ನಿಯಮಬಾಹಿರವಾಗಿ ಮಾರ್ಗಪಲ್ಲಟ ಮಾಡಿ ವೆಚ್ಚ ಮಾಡಿರುವುದು, ಓಚರ್‌ಗಳಲ್ಲಿ ತಿದ್ದುಪಡಿ ಮಾಡಿ ಅಕ್ರಮ ಮಾಡಿರುವುದು ಕಂಡುಬಂದಿರುತ್ತದೆ. ಸ್ವಚ್ಛಗ್ರಾಮ ಯೋಜನೆಯಡಿ ಕುಡಿಯುವ ನೀರು ಪೂರೈಕೆ ಕೆಲಸಕ್ಕೆ ಮಾಡಿರುವ ವೆಚ್ಚಕ್ಕೆ ತಾಲ್ಲೂಕು ಪಂಚಾಯಿತಿ ಅನುಮತಿ ಪಡೆದಿಲ್ಲದಿರುವುದು ಸೇರಿದಂತೆ ಈ ಎಲ್ಲಾ ಅವ್ಯವಹಾರಗಳಲ್ಲಿ ಸಮಭಾಗಿಯಾಗಿರುವ ಆರೋಪದಡಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ 1993 ಕಲಂ 43(ಎ)ರ ಅಡಿಯಲ್ಲಿ ಕ್ರಮ ಕೈಗೊಳ್ಳುವಂತೆ ಪ್ರದೇಶಿಕ ಆಯುಕ್ತರು, ಬೆಂಗಳೂರು ಇವರಿಗೆ ಪ್ರಸ್ತಾವನೆಯನ್ನು ಕಳುಹಿಸಿರುತ್ತಾರೆ.

ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರು ಮೇಲೆ ಓದಲಾದ ಕ್ರಮಾಂಕ (3)ರಲ್ಲಿ ಶ್ರೀ ಲೋಕೇಶ್ ಪಲ್ಲವಿ ಹಿಂದಿನ ಅಧ್ಯಕ್ಷರು, ಹಿರೇಕೆರೆಹಳ್ಳಿ ಗ್ರಾಮ ಪಂಚಾಯತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ದೂರಿಗೆ ಸಂಬಂಧಿಸಿದಂತೆ ದಿನಾಂಕ.11.10.2019ರಲ್ಲಿ ಕಾರಣ ಕೇಳಿ ನೋಟೀಸ್ ನೀಡಲಾಗಿರುತ್ತದೆ ಹಾಗೂ ದಿನಾಂಕ:06.12.2019 ಹಾಗು 13.12.2019ರಲ್ಲಿ ನೋಟೀಸ್ ನೀಡಿ ವಿಚಾರಣೆಗೆ ಹಾಜರಾಗುವಂತೆ ತಿಳಿಸಲಾಗಿರುತ್ತದೆ. ಆದರೆ ಖುದ್ದು ಹಾಜರಾಗಿರುವುದಿಲ್ಲ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಚಿತ್ರದುರ್ಗ ಜಿಲ್ಲಾ ಪಂಚಾಯತ್ ರವರು ವಿಶೇಷ ಲೆಕ್ಕ ತಪಾಸಣಾ ವರದಿಯಲ್ಲಿ ಉಲ್ಲೇಖಿಸಿರುವಂತೆ, 14ನೇ ಹಣಕಾಸು ಯೋಜನೆಯಡಿ ರೂ.54,515/-ಹಾಗೂ ಸ್ವಚ್ಛ ಗ್ರಾಮ ಯೋಜನೆಯಡಿ ರೂ.74,063/-ಗಳನ್ನು ನಿಯಮಬಾಹಿರವಾಗಿ ಮಾರ್ಗಪಲ್ಲಟ ಮಾಡಿ ವೆಚ್ಚ ಮಾಡಿರುವುದು, ಓಚರ್‌ಗಳಲ್ಲಿ ತಿದ್ದುಪಡಿ ಮಾಡಿ ಅಕ್ರಮ ಮಾಡಿರುವುದು, ಸ್ವಚ್ಛಗ್ರಾಮ ಯೋಜನೆಯಡಿ ಕುಡಿಯುವ ನೀರು ಪೂರೈಕೆ ಕೆಲಸಕ್ಕೆ ಮಾಡಿರುವ ವೆಚ್ಚಕ್ಕೆ ತಾಲ್ಲೂಕು ಪಂಚಾಯಿತಿ ಅನುಮತಿ ಪಡೆಯದಿರುವುದು ಸೇರಿದಂತೆ ಈ ಎಲ್ಲಾ

ಅವ್ಯವಹಾರಗಳಲ್ಲಿ ಶ್ರೀ ಲೋಕೇಶ್ ಪಲ್ಲವಿರವರು ಸಮಭಾಗಿಯಾಗಿರುವುದು ದೃಡಪಟ್ಟಿರುತ್ತದೆ. ಇವರ ಮೇಲಿರುವ ದೂರಿನ ಬಗ್ಗೆ ನೀಡಿರುವ ಸಮಜಾಯಿಷಿಯು ಸಮರ್ಥನೀಯವಾಗಿರುವುದಿಲ್ಲ ಹಾಗೂ ಸದರಿಯವರು ಸರ್ಕಾರದ ಅನುದಾನ ದುರ್ಬಳಕೆ ಮತ್ತು ಕರ್ತವ್ಯ ಲೋಪ ಮಾಡಿರುವುದು ದೃಡಪಟ್ಟಿರುತ್ತದೆ. ಆದ ಕಾರಣ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಕ್ರಮ ಜರುಗಿಸಬಹುದಾಗಿರುತ್ತದೆಂದು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣೆ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀ ಲೋಕೇಶ್ ಪಲ್ಲವಿ ಹಿಂದಿನ ಅಧ್ಯಕ್ಷರು, ಹಿರೇಕೆರೆಹಳ್ಳಿ ಗ್ರಾಮ ಪಂಚಾಯತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ರನ್ವಯ ಸದಸ್ಯತ್ವದಿಂದ ತೆಗೆದು ಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 173 ಗ್ರಾಪಂಅ 2020 ಬೆಂಗಳೂರು, ದಿನಾಂಕ:09.03.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಲೋಕೇಶ್ ಪಲ್ಲವಿ ಹಿಂದಿನ ಅಧ್ಯಕ್ಷರು, ಹಿರೇಕೆರೆಹಳ್ಳಿ ಗ್ರಾಮ ಪಂಚಾಯತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ಪ್ರಕರಣಕ್ಕೆ ಸಂಬಂಧಿಸಿದಂತೆ, ವಿಶೇಷ ಲೆಕ್ಕ ತಪಾಸಣಾ ವರದಿಯಲ್ಲಿ, 14ನೇ ಹಣಕಾಸು ಯೋಜನೆಯಡಿ ರೂ.54,515/-ಗಳು ಹಾಗೂ ಸ್ವಚ್ಛ ಗ್ರಾಮ ಯೋಜನೆಯಡಿ ರೂ.74,063/-ಗಳನ್ನು ನಿಯಮಬಾಹಿರವಾಗಿ ಮಾರ್ಗಪಲ್ಲಟ ಮಾಡಿ ವೆಚ್ಚ ಮಾಡಿರುವುದು, ಓಚರ್‌ಗಳಲ್ಲಿ ತಿದ್ದುಪಡಿ ಮಾಡಿ ಅಕ್ರಮ ಮಾಡಿರುವುದು, ಸ್ವಚ್ಛಗ್ರಾಮ ಯೋಜನೆಯಡಿ ಕುಡಿಯುವ ನೀರು ಪೂರೈಕೆ ಕೆಲಸಕ್ಕೆ ಮಾಡಿರುವ ವೆಚ್ಚಕ್ಕೆ ತಾಲ್ಲೂಕು ಪಂಚಾಯಿತಿ ಅನುಮತಿ ಪಡೆಯದಿರುವುದು ಸೇರಿದಂತೆ, ಸರ್ಕಾರದ ಅನುದಾನ ದುರ್ಬಳಕೆ ಹಾಗೂ ಕರ್ತವ್ಯ ಲೋಪ ಮಾಡಿರುವುದು ದೃಡಪಟ್ಟಿರುತ್ತದೆ. ಆದುದರಿಂದ ಶ್ರೀ ಲೋಕೇಶ್ ಪಲ್ಲವಿ ಹಿಂದಿನ ಅಧ್ಯಕ್ಷರು, ಹಿರೇಕೆರೆಹಳ್ಳಿ ಗ್ರಾಮ ಪಂಚಾಯತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ರವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣದ 43(ಎ) ರನ್ವಯ ಹಿರೇಕೆರೆಹಳ್ಳಿ ಗ್ರಾಮ ಪಂಚಾಯತಿಯ ಸದಸ್ಯತ್ವದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಈ ಪ್ರಕರಣದಲ್ಲಿ ಸರ್ಕಾರಿ ಅನುದಾನ ದುರ್ಬಳಕೆಗೆ ಸಂಬಂಧಿಸಿದಂತೆ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 157(2) ಮತ್ತು 246(8)ರಡಿ ಸಂಬಂಧಪಟ್ಟವರಿಂದ ಭೂ ಕಂದಾಯ ಬಾಕಿ ಎಂದು ವಸೂಲಿ ಮಾಡಲು ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕ ಪಂಚಾಯತಿ ಮೊಳಕಾಲ್ಮೂರು ಇವರಿಗೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 09/03/2020.
*(ನವೀನ್ ಕುಮಾರ್.ಬಿ)*
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1) ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, 2ನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಶಾಂತಿನಗರ, ಕೆ.ಹೆಚ್. ರಸ್ತೆ, ಬೆಂಗಳೂರು.
2) ಜಿಲ್ಲಾಧಿಕಾರಿ, ಚಿತ್ರದುರ್ಗ, ಚಿತ್ರದುರ್ಗ ಜಿಲ್ಲೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಚಿತ್ರದುರ್ಗ ಜಿಲ್ಲೆ.

4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಮೊಳಕಾಲ್ಮೂರು, ಚಿತ್ರದುರ್ಗ ಜಿಲ್ಲೆ. **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಮೊಳಕಾಲ್ಮೂರು, ಚಿತ್ರದುರ್ಗ ಜಿಲ್ಲೆ ಇವರ ಮುಖಾಂತರ)**
5) ಶ್ರೀ ಲೋಕೇಶ್ ಪಲ್ಲವಿ ಹಿಂದಿನ ಅಧ್ಯಕ್ಷರು, ಹಿರೆಕೆರೆಹಳ್ಳಿ ಗ್ರಾಮ ಪಂಚಾಯತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
6) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಕೆರೆಹಳ್ಳಿ ಗ್ರಾಮ ಪಂಚಾಯತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.